# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 2224 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 26-03-2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಕರಾವಳಿ ಸುಮಾರು 320 ಕಿ.ಮೀ ಉದ್ದ ಹೊಂದಿದ್ದು, ಇಲ್ಲಿ ಹೊಸ ಬಗೆಯ ಪ್ರವಾಸಿ ಆಕರ್ಷಣೆಗಳಿಗೆ ಪೂರಕವಾದ ಭೌಗೋಳಿಕ ಧಾರ್ಮಿಕ ಸಾಂಸ್ಕೃತಿಕ ಹಾಗೂ ಪಾರಂಪರಿಕ ಹಿನ್ನಲೆಯನ್ನು ಹೊಂದಿರುವ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಹೇರಳ ಅವಕಾಶಗಳಿರುವ ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಹಾಗೂ ರೂಪಿಸಿರುವ ಯೋಜನೆಗಳೇನು; | 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 385ರಲ್ಲಿ "ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಅಭಿವೃದ್ಧಿ ಹಾಗೂ ರಸ್ತೆಬದಿ ಸೌಲಭ್ಯಗಳನ್ನು (ಹೈವೇ ಹಬ್ಸ್) ಉನ್ನತೀಕರಿಸುವ ಮೂಲಕ ಶೈಕ್ಷಣಿಕ, ಆರೋಗ್ಯ, ಸಾಹಸ ಜಲಸಾರಿಗೆ ಹಾಗೂ ಕಡಲ ತೀರದ ಪ್ರವಾಸೋದ್ಯಮಗಳಿಗೆ ಲಭ್ಯವಿರುವ ಅವಕಾಶಗಳನ್ನು ಉಪಯೋಗಿಸಿ ಕೊಳ್ಳಲಾಗುವುದು" ಎಂದು ಘೋಷಿಸಲಾಗಿದ್ದು, ಆ ಸಂಬಂಧ ವೃತ್ತಿಪರ ಸಲಹಾ ಸಂಸ್ಥೆಯನ್ನು ಆಯ್ಕೆ ಮಾಡಲು ಕರೆದ ಟೆಂಡರ್‌ನಲ್ಲಿ ಬಿಡ್ಡುದಾರರಾದ M/s IPE Global Limited ಸಂಸ್ಥೆಯವರಿಗೆ ಕಾರ್ಯಾದೇಶ ನೀಡಲಾಗಿರುತ್ತದೆ ಹಾಗೂ ವಹಿವಾಟು ಸಲಹೆಗಾರರನ್ನಾಗಿ M/s Ernst and Young LLP ಸಂಸ್ಥೆಯನ್ನು ಆಯ್ಕೆ ಮಾಡಿ ಕಾರ್ಯಾದೇಶ ನೀಡಲಾಗಿರುತ್ತದೆ.<br><br>ಮುಂದುವರೆದು, ಪಿಪಿಪಿ ಮಾದರಿಯಲ್ಲಿ ಉಡುಪಿಯಲ್ಲಿ 03 ಯೋಜನೆಗಳನ್ನು ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 02 ಯೋಜನೆಗಳನ್ನು ಕೈಗೊಳ್ಳಲು Concept Noteಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯಿಂದ ಅನುಮೋದನೆ ಪಡೆಯಲಾಗಿರುತ್ತದೆ.<br><br>ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ದಿನಾಂಕ:10.01.2026 ರಂದು ಕರಾವಳಿ ಕರ್ನಾಟಕ ಪ್ರವಾಸೋದ್ಯಮ ಸಮಾವೇಶ-2026 ಅನ್ನು ನಡೆಸಲಾಗಿತ್ತು. ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ, ಈ ಮೂರು ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸಮಗ್ರ ದೃಷ್ಟಿಕೋನ ವನ್ನು ರೂಪಿಸುವುದು ಸದರಿ ಸಮಾವೇಶದ ಪ್ರಾಥಮಿಕ ಉದ್ದೇಶವಾಗಿದ್ದು, ಹೂಡಿಕೆಯನ್ನು ಆಕರ್ಷಿಸಲು, ಉದ್ಯಮಶೀಲತೆಯನ್ನು ಉತ್ತೇಜಿಸಲು, ಉದ್ಯೋಗವನ್ನು ಸೃಷ್ಟಿಸಲು ಮತ್ತು ಪ್ರದೇಶದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ನೈಸರ್ಗಿಕ, ಸಾಂಸ್ಕೃತಿಕ, ಕಡಲ ಮತ್ತು ಪರಿಸರ |

---2

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| | | ಸ್ವತ್ತುಗಳನ್ನು ಬಳಸಿಕೊಳ್ಳುವತ್ತ ಒತ್ತು ನೀಡುವುದು, ಅನುಮೋದನೆಗಳಲ್ಲಿ ಕಾರ್ಯವಿಧಾನದ ವಿಳಂಬಗಳು ಮತ್ತು ಪ್ರದೇಶ-ನಿರ್ದಿಷ್ಟ ಪ್ರವಾಸೋದ್ಯಮ ನೀತಿಯ ಅಗತ್ಯತೆ ಸೇರಿದಂತೆ ನೀತಿ ಮತ್ತು ನಿಯಂತ್ರಕ ನಿರ್ಬಂಧಗಳನ್ನು ಗುರುತಿಸುವುದು ಮತ್ತು ಚುನಾಯಿತ ಪ್ರತಿನಿಧಿಗಳು, ಉದ್ಯಮ ತಜ್ಞರು, ಹೂಡಿಕೆದಾರರು ಮತ್ತು ಆಡಳಿತಾತ್ಮಕ ನಾಯಕತ್ವದಿಂದ ಕಾರ್ಯ ಸಾಧ್ಯವಾದ ಸಲಹೆಗಳನ್ನು ಪಡೆಯುವುದು ಪ್ರಮುಖ ಉದ್ದೇಶವಾಗಿತ್ತು. ಕರಾವಳಿ ಕರ್ನಾಟಕದಲ್ಲಿ ಪ್ರವಾಸೋದ್ಯಮ ಕ್ಷೇತ್ರದ ಸುಸ್ಥಿರ ಮತ್ತು ಸಮಗ್ರ ಬೆಳವಣಿಗೆಯನ್ನು ಖಚಿತಪಡಿಸಿ ಕೊಳ್ಳಲು ಪರಿಸರ ಪ್ರವಾಸೋದ್ಯಮ, ಬೀಚ್ ಮತ್ತು ಜಲ ಕ್ರೀಡಾ ಮೂಲಸೌಕರ್ಯ, ಪರಂಪರೆ ಪ್ರವಾಸೋದ್ಯಮ, ಸಮುದಾಯ ತೊಡಗಿಸಿಕೊಳ್ಳುವಿಕೆ ಮತ್ತು ಕೈಗಾರಿಕಾ ಸೌಲಭ್ಯ ಕಾರ್ಯವಿಧಾನಗಳಂತಹ ಆದ್ಯತೆಯ ಕ್ಷೇತ್ರಗಳ ಅಭಿವೃದ್ಧಿ ಕುರಿತು ಚರ್ಚಿಸಲಾಯಿತು. |
| ಆ) | ಧಾರ್ಮಿಕ, ಜೈವಿಕ ಪರಿಸರ ಮತ್ತು ಬೀಚ್‌ಗಳ ಅಭಿವೃದ್ಧಿಗೆ ಪೂರಕವಾಗಿ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಬೇಕಾಗಿದ್ದು, ಈ ಕುರಿತು ಸರ್ಕಾರ ರೂಪಿಸಿರುವ ಯೋಜನೆಗಳೇನು; | ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಇಲಾಖೆಯ ನಿವೇಶನಗಳಲ್ಲಿ ಪಿಪಿಪಿ ಮಾದರಿಯಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಗೊಳಿಸಲು ಕ್ರಮ ವಹಿಸಲಾಗುತ್ತಿದೆ.<br><br>ಕರಾವಳಿ ಜಿಲ್ಲೆಗಳನ್ನೊಳಗೊಂಡಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೆ ತರಲಾಗಿರುತ್ತದೆ. ಈ ನೀತಿಯಡಿ ಗುರುತಿಸಲಾಗಿರುವ 25 ಪ್ರವಾಸಿ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಲು ಮುಂದೆ ಬರುವ ಖಾಸಗಿ ಬಂಡವಾಳ ಹೂಡಿಕೆದಾರರನ್ನು ಸೆಳೆಯಲು ಸಹಾಯಧನ, ಪ್ರೋತ್ಸಾಹಕಗಳು ಮತ್ತು ರಿಯಾಯಿತಿ ಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಸಣ್ಣ ಉದ್ದಿಮೆದಾರರನ್ನು ಉತ್ತೇಜಿಸಲು ಒಂದು ತಿಂಗಳ ಕೌಶಲ್ಯಾಭಿವೃದ್ಧಿ ತರಬೇತಿ ನೀಡುವ ಕಾರ್ಯಕ್ರಮ ಮತ್ತು ಮೊಬೈಲ್ ಕ್ಯಾಂಟೀನ್ ಖರೀದಿಸಲು ಸಹಾಯಧನ ಕಾರ್ಯಕ್ರಮ ಯೋಜನೆಗಳನ್ನು ಕೈಗೊಳ್ಳಲಾಗುತ್ತಿದೆ. |

---3

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಕರಾವಳಿಯ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗಿ 'ಹೆಲಿ ಟ್ಯೂರಿಸಂ' ಸೌಲಭ್ಯ ಯೋಜನೆಯನ್ನು ಅನುಷ್ಠಾನಕ್ಕೆ ತರುವುದು ಅತ್ಯಂತ ಅಗತ್ಯವಾಗಿದ್ದು, ಈ ಕುರಿತು ಸರ್ಕಾರ ಯಾವ ಕ್ರಮ ವಹಿಸಿದೆ; | ರಾಜ್ಯ ಪ್ರವಾಸೋದ್ಯಮ ಕರ್ನಾಟಕ ಪ್ರಮುಖ ಪ್ರವಾಸಿ ತಾಣಗಳ ವೀಕ್ಷಣೆಗೆ ಅನುವಾಗುವಂತೆ ಹಾಗೂ High Net Worth (HNW) ಗ್ರಾಹಕರಿಗೆ ಬೆಂಗಳೂರಿನಿಂದ ಕಡಿಮೆ ಅಂತರದಲ್ಲಿರುವ ಪ್ರವಾಸಿ ತಾಣಗಳಿಗೆ ಹೆಲಿಕಾಪ್ಟರ್ ಸಾರಿಗೆ ಸೇವೆಯನ್ನು ಸಕ್ರಿಗೊಳಿಸುವ ಮೂಲಕ ಪ್ರವಾಸೋದ್ಯಮವನ್ನು ಇನ್ನಷ್ಟು ಉತ್ತೇಜಿಸುವ ಉದ್ದೇಶದಿಂದ ಹೆಲಿ ಟೂರಿಸಂ ಯೋಜನೆಯನ್ನು ಅನುಷ್ಠಾನ ಗೊಳಿಸಲಾಗಿರುತ್ತದೆ.<br><br>ಈ ಸಂಬಂಧ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮವು ಹೆಲಿಕಾಪ್ಟರ್ ಪ್ರವಾಸೋದ್ಯಮ ಮತ್ತು ಸಾರಿಗೆ ಸಂಬಂಧಿತ ಸೇವೆಗಳನ್ನು ಒದಗಿಸುವ ಹೆಲಿಕಾಪ್ಟರ್ ಸೇವಾ ಪೂರೈಕೆದಾರರನ್ನು ಆಯ್ಕೆ ಮಾಡಲು 2020-21ನೇ ಸಾಲಿನಲ್ಲಿ Expression of Interest ಆಹ್ವಾನಿಸಿರುತ್ತದೆ. ಈ ಮೂಲಕ ಕೆಳಕಂಡ ಅರ್ಹ ಸಂಸ್ಥೆಗಳೊಂದಿಗೆ ಜನವರಿ 2022ರಲ್ಲಿ 5 ವರ್ಷಗಳ ಅವಧಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.<br><br>1. M/S Chipsan Aviationa Pvt. Ltd, New Delhi.<br>2. M/S Thumby Aviation Pvt. Ltd Thiruvanthapuram.<br><br>ಮುಂದುವರೆದು, ಸದರಿ ಸಂಸ್ಥೆಗಳೊಂದಿಗೆ ಸಭೆಯನ್ನು ನಡೆಸಲಾಗಿದ್ದು, ಕರಾವಳಿ ಪ್ರದೇಶವಾದ ಮಂಗಳೂರಿಗೆ Scheduled Plan ನೀಡಲು ತಿಳಿಸಲಾಗಿದೆ. |
| ಈ) | ಕರಾವಳಿಯಲ್ಲಿ ಸುಮಾರು 22 ಬೀಚ್ ಹಾಗೂ 30ಕ್ಕೂ ಹೆಚ್ಚು ಪ್ರಮುಖ ಧಾರ್ಮಿಕ ಕೇಂದ್ರಗಳಿದ್ದು, ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿದ್ದು, ಪರಿಸರಕ್ಕೆ ಪೂರಕವಾದ ಪ್ರವಾಸೋದ್ಯಮ ಅಭಿವೃದ್ಧಿಗೆ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕಾಗಿದ್ದು, ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಿ, ಅಭಿವೃದ್ಧಿ ಪಡಿಸಬೇಕಾದ ಅನಿವಾರ್ಯತೆ ಇದ್ದು, ಈ ಕುರಿತು ಸರ್ಕಾರ ಕೂಡಲೇ ಅಗತ್ಯ ಕ್ರಮ ವಹಿಸುವುದೇ? | ಕರಾವಳಿ ಜಿಲ್ಲೆಗಳನ್ನೊಳಗೊಂಡಂತೆ, ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ನ್ನು ಈಗಾಗಲೇ ರೂಪಿಸಲಾಗಿರುತ್ತದೆ. |

**TOR 125 TDV 2026**

(ಎಚ್.ಕೆ. ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.